# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಡವಳಿಗಳು

ವಿಷಯ: ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ

ಉಲ್ಲೇಖ: 1) ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸ್ಥಾಯಿ ಸಮಿತಿಯು ವಿಷಯ ಸಂಖ್ಯೆ: ತೆಆಸ್ಥಾಸ/05/2014-15ರಲ್ಲಿ ದಿ:02-11-2015 ರಂದು ತೆಗೆದುಕೊಂಡಿರುವ ನಿರ್ಣಯ

2) ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 16 ಎಸ್‌ಆರ್‌ಪಿ 2017, ದಿನಾಂಕ: 30-03-2017.

3) ಮುಖ್ಯ ಲೆಕ್ಕಾಧಿಕಾರಿಗಳ ವರದಿ ದಿನಾಂಕ: 17-04-2017.

* * * * *

**ಪ್ರಸ್ತಾವನೆ:**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರಿ ನೌಕರರುಗಳಿಗೆ 2012ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ 1ನೇ ಜನವರಿ 2017 ರಿಂದ ಜಾರಿಗೆ ಬರುವಂತೆ ತುಟ್ಟಿ ಭತ್ಯೆಯ ದರವನ್ನು ಮೂಲ ವೇತನದ ಶೇಕಡ 40.25 ರಿಂದ ಶೇಕಡ 43.25ಕ್ಕೆ ಹೆಚ್ಚಿಸಿ ಹಾಗೂ ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು / ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು / ಕುಟುಂಬ ನಿವೃತ್ತಿ ವೇತನದಾರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ / ಕುಟುಂಬ ನಿವೃತ್ತಿ ವೇತನದ ಶೇಕಡ 40.25 ರಿಂದ ಶೇಕಡ 43.25ಕ್ಕೆ ಹೆಚ್ಚಿಸಿ ದಿನಾಂಕ: 01-01-2017 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿರುತ್ತದೆ.

ಈ ಹಿಂದೆ ಸರ್ಕಾರವು ತುಟ್ಟಿಭತ್ಯೆಯನ್ನು ಹೆಚ್ಚಿಸಿರುವ ಆದೇಶವನ್ನು ನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳಲು ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ತೀರ್ಮಾನಕ್ಕಾಗಿ ಟಿಪ್ಪಣಿಯನ್ನು ಮಂಡಿಸಲಾಗಿದ್ದು, ಸದರಿ ಟಿಪ್ಪಣಿಗೆ ಸಂಬಂಧಿಸಿದಂತೆ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯು ವಿಷಯ ಸಂಖ್ಯೆ: ತೆಆಸ್ಥಾಸ/05/2014-15ರಲ್ಲಿ ದಿನಾಂಕ: 02-11-2015 ರಂದು ಉಲ್ಲೇಖ-(1)ರಲ್ಲಿ ಈ ಕೆಳಕಂಡಂತೆ ನಿರ್ಣಯವನ್ನು ತೆಗೆದುಕೊಳ್ಳಲಾಗಿರುತ್ತದೆ.

"ಸರ್ಕಾರಿ ಆದೇಶದ ಅನುಸಾರ ಕಾಲಕಾಲಕ್ಕೆ ತುಟ್ಟಿಭತ್ಯೆಯನ್ನು ಪಾವತಿಸುವುದು ಕಡ್ಡಾಯವಾಗಿರುವ ಹಿನ್ನೆಲೆಯಲ್ಲಿ ಪಾಲಿಕೆಯ ಖಾಯಂ ನೌಕರರಿಗೆ ಮತ್ತು ಪಿಂಚಣಿದಾರರಿಗೆ ಅನ್ವಯವಾಗುವಂತೆ ಅಳವಡಿಸಿಕೊಂಡು ಪಾವತಿಸುವುದು ಹಾಗೂ ಇನ್ನು ಮುಂದೆ ಕಾಲಕಾಲಕ್ಕೆ ಸರ್ಕಾರದ ಆದೇಶದನ್ವಯ ನೀಡಲಾಗುವ ತುಟ್ಟಿಭತ್ಯೆಯನ್ನು ಪಾಲಿಕೆಯಲ್ಲಿ ಅಳವಡಿಸಿಕೊಂಡು ಪಾವತಿಸಿದ ನಂತರ ದಾಖಲಾತಿಗಾಗಿ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಮುಂದೆ ಮಂಡಿಸಲು" ತೀರ್ಮಾನಿಸಲಾಗಿರುತ್ತದೆ.

ಆದ್ದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**-: ಆದೇಶ :-**

ಸಂಖ್ಯೆ: ಬಿ12(5ಜಿ)ಪಿಆರ್/206/2009-10 / 2015-16 ದಿನಾಂಕ: 17/4/17

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 16 ಎಸ್‌ಆರ್‌ಪಿ 2017, ದಿನಾಂಕ: 30-03-2017ನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಿಕೊಂಡು, ಪಾಲಿಕೆಯ ಅಧಿಕಾರಿ / ನೌಕರರುಗಳಿಗೆ ಹಾಗೂ ನಿವೃತ್ತಿ

ವೇತನದಾರರು / ಕುಟುಂಬ ನಿವೃತ್ತಿ ವೇತನದಾರರಿಗೆ 2012ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ದಿನಾಂಕ: 01-01-2017 ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇಕಡ 40.25 ರಿಂದ ಶೇಕಡ 43.25ಕ್ಕೆ ಹೆಚ್ಚಿಸಿ ಮಂಜೂರು ಮಾಡಿದೆ. ಇದರಂತೆ, ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಸೂಕ್ತಕ್ರಮ ಕೈಗೊಳ್ಳಲು ಸೂಚಿಸಿದೆ.

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಶಾಖೆಗೆ ರವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಶಾಖೆಗೆ ರವರಿಗೆ ಕಳುಹಿಸಿದೆ.
: ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ/ಹಣಕಾಸು/ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿ ರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರಿಗೆ ಹಾಗೂ ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮು.ಲೆ.ಅ/ಮು.ಲೆ.ಪ/ಎಲ್ಲಾ ವಲಯ ಸ.ನಿ (ಹಣಕಾಸು) ರವರಿಗೆ ಕಳುಹಿಸಿದೆ.
: ಕಛೇರಿ ಪ್ರತಿ.